ದಿನಾಂಕ: 18.01.2021 ರಂದು ಮಧ್ಯಾಹ್ನ 3.00 ಗಂಟೆಗೆ ಶಿವನಗರ ವಾರ್ಡ್ ನಂ. 107 ರಲ್ಲಿ ನೋಡಲ್ ಅಧಿಕಾರಿಯವರಾದ **ಶ್ರೀ ಲಿಂಗಣ್ಣ ಗುಂಡಳ್ಳಿ**, ರವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯ ನಡುವಳಿಗಳ ವಿವರ:-

**ಹಾಜರಿದ್ದ ಪಾಲಿಕೆಯ ಅಧಿಕಾರಿಗಳು:-**

1. ಶ್ರೀ ಸೋಮಶೇಖರ್.ಜಿ.ಎಲ್ ಸಹಾಯಕ ಅಭಿಯಂತರರು, ವಾರ್ಡ್ ನಂ. 107 ಶಿವನಗರ
2. ಶ್ರೀ ಜಮೀರ್. ಕಿರಿಯ ಅಭಿಯಂತರರು, ವಿದ್ಯುತ್,
3. ಶ್ರೀ ಹೆಚ್.ಎನ್. ನರಸಿಂಹಯ್ಯ, ಸಂಚಾರಿ ಪೋಲಿಸ್, ವಿಜಯನಗರ
4. ಶ್ರೀ ರಾಜಣ್ಣ, ಎ.ಎಸ್.ಐ. ಬಸವೇಶ್ವರನಗರ ಪೋಲಿಸ್ ಠಾಣೆ,
5. ಶ್ರೀ ಶಿವರಾಮಯ್ಯ, ಸಂಚಾರಿ ಪೋಲಿಸ್ ಠಾಣೆ, ರಾಜಾಜಿನಗರ,
6. ಶ್ರೀ ಲೋಕೇಶ್, ಕಂದಾಯ ಪರಿವೀಕ್ಷಕರು,
7. ಶ್ರೀ ಶಿವಕುಮಾರ್ , ಹಿರಿಯ ಆರೋಗ್ಯ ಪರಿವೀಕ್ಷಕರು
8. ಶ್ರೀ ರಮೇಶ್, ಪಶು ಸಂಘೋಪನಾ ಇಲಾಖೆ
9. ಶ್ರೀ ರವಿ, ಕಂದಾಯ ವಸೂಲಿಗಾರರು
10. ಶ್ರೀ ಶ್ರೀನಾಥ್, ಅರಣ್ಯ ಇಲಾಖೆ
11. ಶ್ರೀಮತಿ ಮಮತಾ.ಆರ್. ಮೀಟರ್ ರೀಡರ್
12. ಶ್ರೀ ಆರ್. ನರಸಿಂಹ, ಕೆಲಸ ಪರಿವೀಕ್ಷಕರು, ಬಿ.ಡ್ಬ್ಲ್ಯೂಎಸ್.ಎಸ್.ಬಿ.
13. ಶ್ರೀ ನಾಗರಾಜ್, ತೋಟಗಾರಿಕೆ ಇಲಾಖೆ
14. ಶ್ರೀ ಹನಿಕೇಶ್, ಕಿರಿಯ ಆರೋಗ್ಯ ಪರಿವೀಕ್ಷಕರು
15. ಶ್ರೀ ಶರಣಬಸವ, ಮಾರ್ಷಲ್

ಶ್ರೀ ಸೋಮಶೇಖರ್.ಜಿ.ಎಲ್. ಕಾರ್ಯದರ್ಶಿಗಳು ಹಾಗೂ ಸಂಚಾಲಕರು, ವಾರ್ಡ್ ನಂ. 107ರವರು ಸಭೆಗೆ ಆಗಮಿಸಿರುವ ಎಲ್ಲರಿಗೂ ಸ್ವಾಗತ ಕೋರುತ್ತಾ, ಈ ಕೆಳಗಿನ ಅಂಶಗಳನ್ನು ಸಭೆಯಲ್ಲಿ ಚರ್ಚಿಸಲಾಯಿತು.

1. ನೋಡಲ್ ಅಧಿಕಾರಿಗಳು ಮಾತನಾಡುತ್ತಾ, ತಿಮ್ಮಯ್ಯ ರಸ್ತೆಯಲ್ಲಿ ಬರುವ ಶೋಭ ವೈನ್ ಸ್ಟೋರ್ ಮುಂಭಾಗದಲ್ಲಿ ರಾತ್ರಿ ಸಮಯದಲ್ಲಿ ಕೆಲ ಯುವಕರು ರಸ್ತೆಯಲ್ಲಿ ಮಧ್ಯಪಾನ ಮಾಡುತ್ತಿರುವುದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದಾಗಿ ತಿಳಿಸಿದರು. ಇದಕ್ಕೆ ಉತ್ತರವಾಗಿ ಶ್ರೀ ರಾಜಣ್ಣ, ಎ.ಎಸ್.ಐ. ಬಸವೇಶ್ವರನಗರ ಪೋಲಿಸ್ ಠಾಣೆ ರವರು ರಾತ್ರಿ ಸಮಯದಲ್ಲಿ ಗಸ್ತು ವಾಹವನ್ನು ತರಿಸಿ ಸೂಕ್ತ ಕ್ರಮ ಕೈಗೊಳ್ಳಲಾಗುವುದೆಂದು ತಿಳಿಸಿದರು
2. ಶ್ರೀ ವೆಂಕಟೇಶ್, ವಾರ್ಡ್ ಕಮಿಟಿ ಸದಸ್ಯರು ಮಾತನಾಡುತ್ತಾ, 13ನೇ ಮುಖ್ಯ ರಸ್ತೆ, 3ನೇ ವೈ ಬ್ಲಾಕ್, ರಾಜಾಜಿನಗರ, ಇಲ್ಲಿ ಬಿ.ಡ್ಬ್ಲ್ಯೂಎಸ್.ಎಸ್.ಬಿ. ವತಿಯಿಂದ ಒಳಚರಂಡಿ ಪೈಪನ್ನು ಬದಲಾಯಿಸುವ ಕಾಮಗಾರಿಯನ್ನು ಕೈಗೆತ್ತಿಕೊಂಡು ಕಾಮಗಾರಿಯನ್ನು ಪೂರ್ಣಗೊಳಿಸಿದರು ಸಹ ಸದರಿ ಸ್ಥಳದಲ್ಲಿ ಉಳಿದಿರುವ ಡೆಬ್ರಿಸನ್ನು ತೆರವುಗೊಳಿಸಿರುವುದಿಲ್ಲವೆಂದು ತಿಳಿಸಿದರು. ಇದಕೆ ಉತ್ತರವಾಗಿ ಹಾಜರಿದ್ದ ಬಿ.ಡ್ಬ್ಲ್ಯೂಎಸ್.ಎಸ್.ಬಿ. ಅಧಿಕಾರಿಗಳು ಪರಿಶೀಲಿಸಿ ಸೂಕ್ತ ಕ್ರಮ ತೆಗೆದುಕೊಳ್ಳುವುದಾಗಿ ತಿಳಿಸಿದರು.
3. ಶ್ರೀ ವಸಂತಕುಮಾರ್, ವಾರ್ಡ್ ಕಮಿಟಿ ಸದಸ್ಯರು ಮಾತನಾಡುತ್ತಾ, ಪಶ್ಚಿಮ ಕಾರ್ಡ್ ರಸ್ತೆಯಲ್ಲಿ ಹಾದು ಹೋಗುವ ಮೇಲು ಸೇತುವೆಯ ಮೇಲೆ ಕಸ ಎಲ್ಲೆಂದರಲ್ಲಿ ಬಿದ್ದಿದ್ದು, ಸದರಿ ಕಸವನ್ನು ತೆರವುಗೊಳಿಸಬೇಕೆಂದು ಸಭೆಯಲ್ಲಿ ತಿಳಿಸಿದರು. ಇದಕ್ಕೆ ಉತ್ತರವಾಗಿ ಕಿರಿಯ ಆರೋಗ್ಯ ಪರಿವೀಕ್ಷಕರು, ಪರಿಶೀಲಿಸಿ ಕಸವನ್ನು ತೆರವುಗೊಳಿಸಲಾಗುವುದೆಂದು ಸಭೆಯಲ್ಲಿ ತಿಳಿಸಿದರು.
4. ಶ್ರೀ ಶಿವರಾಮಯ್ಯ, ಎ.ಎಸ್.ಐ. ಸಂಚಾರಿ ಪೋಲಿಸ್ ಠಾಣೆ, ರಾಜಾಜಿನಗರ ರವರು ಮಾತನಾಡುತ್ತಾ, ಓರಿಯರ್ ಬೇಕರಿ ಹತ್ತಿರವಿರುವ ಪೋಲಿಸ್ ಚೌಕಿಯ ಹತ್ತಿರ ಬೀದಿ ದೀಪವು ಉರಿಯದೆ ಇರುವುದರಿಂದ ರಾತ್ರಿ ಸಮಯದಲ್ಲಿ ಪೋಲಿಸ್ ಇಲಾಖೆಯವರಿಗೆ ಕಾರ್ಯನಿರ್ವಹಿಸಲು ಕಷ್ಟವಾಗುತ್ತಿದೆ ಎಂದು ತಿಳಿಸಿದರು. ಇದಕ್ಕೆ ಉತ್ತರವಾಗಿ ಶ್ರೀ ಸಯದ್ ಜಮೀಲ್, ಕಿರಿಯ ಅಭಿಯಂತರರು, ವಿದ್ಯುತ್ [ಪಶ್ಚಿಮ] ರವರು ಸ್ಥಳವನ್ನು ಪರಿಶೀಲಿಸಿ, ರಿಪೇರಿ ಮಾಡಲು ಕ್ರಮ ಕೈಗೊಳ್ಳಲಾಗುವುದೆಂದು ತಿಳಿಸಿದರು.

Scanned with CamScanner

5. ಸಾರ್ವಜನಿಕರು ಮಾತನಾಡುತ್ತಾ ಓ.ಎಫ್.ಸಿ. ಕೇಬಲ್ ಅಳವಡಿಸುವವರು ರಸ್ತೆಯನ್ನು ಸರಿಯಾಗಿ ಮುಚ್ಚದೇ ಇರುವುದರಿಂದ ಕೆಲವು ಕಡೆ ಗುಂಡಿಗಳಾಗಿದ್ದು, ಇದರಿಂದ ಸಾರ್ವಜನಿಕರಿಗೆ ಓಡಾಡಲು ತೊಂದರೆಯಾಗುತ್ತಿರುತ್ತದೆ ಎಂದು ತಿಳಿಸಿದರು. ಇದಕ್ಕೆ ಉತ್ತರವಾಗಿ ಸಹಾಯಕ ಅಭಿಯಂತರರು ಗುಂಡಿ ಮುಚ್ಚಲು ಅಗತ್ಯ ಕ್ರಮ ಕೈಗೊಳ್ಳುವುದಾಗಿ ಸಭೆಗೆ ತಿಳಿಸಿದರು.
6. ಶ್ರೀ ಕೇಶವ ಮೂರ್ತಿ, ಕಮಿಟಿ ಸದಸ್ಯರು, ಮಾತನಾಡುತ್ತಾ, 9ನೇ ಮುಖ್ಯ ರಸ್ತೆ, ಶಿವನಗರ ಇಲ್ಲಿ ಒಳಚರಂಡಿ ಮಾರ್ಗವು ಆಗಿಂದಾಗೆ ಬ್ಲಾಕ್, ಆಗುತ್ತಿರುವುದರಿಂದ ಕೊಳವೆ ಮಾರ್ಗವನ್ನು ಬದಲಾಯಿಸಬೇಕಾಗಿ ಕೋರಿದರು. ಇದಕ್ಕೆ ಉತ್ತರವಾಗಿ ಹಾಜರಿದ್ದ ಬಿ.ಡ್ಬ್ಲ್ಯೂ.ಎಸ್.ಎಸ್.ಬಿ. ಅಧಿಕಾರಿಗಳು ಮೇಲಾಧಿಕಾರಿಗಳಿಗೆ ತಿಳಿಸಿ, ಕೊಳವೆ ಮಾರ್ಗವನ್ನು ಬದಲಾಯಿಸಲು ಸೂಕ್ತ ಕ್ರಮ ಕೈಗೊಳ್ಳುವುದಾಗಿ ತಿಳಿಸಿದರು.

ಎಲ್ಲಾ ಇಲಾಖೆಗಳಿಗೆ ಸಂಬಂಧಿಸಿದಂತೆ ಸಭೆಯಲ್ಲಿ ತಿಳಿಸುವ ದೂರುಗಳನ್ನು ಸರಿಪಡಿಸಿ, ಮುಂದಿನ ಸಭೆಯಲ್ಲಿ ವರದಿಯನ್ನು ನೀಡುವಂತೆ, ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಕಾರ್ಯದರ್ಶಿ
ವಾರ್ಡ್ ಸಮಿತಿ
ವಾರ್ಡ್ ನಂ. 107

ಸಹಿ/-
ಶ್ರೀ ಲಿಂಗಣ್ಣ ಗುಂಡಳ್ಳಿ
ನೋಡಲ್ ಅಧಿಕಾರಿಗಳು
ವಾರ್ಡ್ ನಂ. 107

ಪ್ರತಿಯನ್ನು:

1. ಮಾನ್ಯ ಜಂಟಿ ಆಯುಕ್ತರು [ಪಶ್ಚಿಮ] ಬಿ.ಬಿ.ಎಂ.ಪಿ. ರವರ ಅವಗಾಹನೆಗಾಗಿ ಸಲ್ಲಿಸಿದೆ.
2. ಮುಖ್ಯ ಅಭಿಯಂತರರು [ಪಶ್ಚಿಮ] ಬಿ.ಬಿ.ಎಂ.ಪಿ. ರವರ ಅವಗಾಹನೆಗಾಗಿ ಸಲ್ಲಿಸಿದೆ.
3. ಆರೋಗ್ಯ ವೈದ್ಯಾಧಿಕಾರಿಗಳು [ಪಶ್ಚಿಮ] ಬಿ.ಬಿ.ಎಂ.ಪಿ. ರವರ ಮಾಹಿತಿಗಾಗಿ ಸಲ್ಲಿಸಿದೆ.
4. ಕಾರ್ಯಪಾಲಕ ಅಭಿಯಂತರರು , ರಾಜಾಜಿನಗರ ವಿಭಾಗ/ಯೋಜನೆ ವಿಭಾಗ ರವರ ಮಾಹಿತಿಗಾಗಿ ಸಲ್ಲಿಸಿದೆ.
5. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು [ಘನತ್ಯಾಜ್ಯ] ರಾಜಾಜಿನಗರ ವಿಭಾಗ ರವರ ಮಾಹಿತಿಗಾಗಿ ಸಲ್ಲಿಸಿದೆ.
6. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು [ಬಿ.ಡ್ಬ್ಲ್ಯೂ.ಎಸ್.ಎಸ್.ಬಿ.] ಬೆಂಗಳೂರು ರವರ ಮಾಹಿತಿಗಾಗಿ ಸಲ್ಲಿಸಿದೆ.
7. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಬೀದಿ ದೀಪಗಳ ನಿರ್ವಹಣೆ, ಬೆಂಗಳೂರು ರವರ ಮಾಹಿತಿಗಾಗಿ ಸಲ್ಲಿಸಿದೆ
8. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು [ಬೆಸ್ಕಾಂ] ಉಪವಿಭಾಗ ಬೆಂಗಳೂರು ರವರ ಮಾಹಿತಿಗಾಗಿ ಸಲ್ಲಿಸಿದೆ
9. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು [ರಸ್ತೆ ಮತ್ತು ಮೂಲ ಭೂತ ಸೌಕರ್ಯ,] ಬೆಂಗಳೂರು ರವರ ಮಾಹಿತಿಗಾಗಿ ಸಲ್ಲಿಸಿದೆ
10. ಕಲ್ಯಾಣ ಅಧಿಕಾರಿ, ಪಶ್ಚಿಮ ವಲಯ, ಬಿ.ಬಿ.ಎಂ.ಪಿ. ರವರ ಮಾಹಿತಿಗಾಗಿ ಸಲ್ಲಿಸಿದೆ.
11. ಸಂಚಾರಿ ಪೋಲಿಸ್ ಠಾಣೆ, ರಾಜಾಜಿನಗರ/ವಿಜಯನಗರ ರವರ ಮಾಹಿತಿಗಾಗಿ ಸಲ್ಲಿಸಿದೆ.
12. ಪೋಲಿಸ್ ಠಾಣೆ, ರಾಜಾಜಿನಗರ/ಬಸವೇಶ್ವರನಗರ. ರವರ ಮಾಹಿತಿಗಾಗಿ ಸಲ್ಲಿಸಿದೆ.
13. ಅರಣ್ಯಾಧಿಕಾರಿ, ಬಿ.ಬಿ.ಎಂ.ಪಿ. ಪಶ್ಚಿಮ ರವರ ಮಾಹಿತಿಗಾಗಿ ಸಲ್ಲಿಸಿದೆ.

Scanned with CamScanner